**Akashvani : Bangalore**
**Regional Bulletin In Kannada**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**30.12.2024** **14.30 hrs**

**<><*<><>*><>**

<u>ಮುಖ್ಯಾಂಶಗಳು</u>

**<><*<><>*><>**

- **ಬಾಹ್ಯಾಕಾಶದಲ್ಲಿ ಹೊಸ ಭಾಷ್ಯ ಬರೆಯಲು ಇಸ್ರೋ ಸಜ್ಜು; ಇಂದು ರಾತ್ರಿ ಎರಡು ಉಪಗ್ರಹಗಳ ಉಡಾವಣೆ**
- **ಗುತ್ತಿಗೆದಾರ ಆತ್ಮಹತ್ಯೆ ಪ್ರಕರಣ; ಸಿಐಡಿ ತನಿಖೆಗೆ ವಹಿಸಿ ಸರ್ಕಾರ ಆದೇಶ**
- **ರೈತರಿಗೆ ಬಾಕಿ ಇರುವ ಹಾಲಿನ ೬೨೨ ಕೋಟಿ ರೂಪಾಯಿ ಬಿಡುಗಡೆ ಮಾಡುವಂತೆ ಬಿ.ವೈ.ವಿಜಯೇಂದ್ರ ಆಗ್ರಹ**
- **ಕೊಡಗಿನ ಕಟ್ಟೆಮಾಡು ಗ್ರಾಮದಲ್ಲಿ ನಿಷೇಧಾಜ್ಞೆ ಜಾರಿ; ಜಿಲ್ಲಾಡಳಿತದಿಂದ ಶಾಂತಿ ಸಭೆ**
- **ಹೊಸ ವರ್ಷಾಚರಣೆ ಹಿನ್ನೆಲೆ; ರಾಜ್ಯದ ಹಲೆವೆಡೆ ಪ್ರವಾಸಿ ತಾಣಗಳಿಗೆ ನಿರ್ಬಂಧ**

**<><*<><>*><>**

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ಇಂದು ರಾತ್ರಿ ೧೦ ಗಂಟೆ ೧೫ ಸೆಕೆಂಡ್‌ಗೆ ಶ್ರೀಹರಿಕೋಟಾದಿಂದ ಎರಡು ಉಪಗ್ರಹಗಳನ್ನು ಉಡಾವಣೆ ಮಾಡಲಿದ್ದು, ಬಾಹ್ಯಾಕಾಶ ನೌಕೆಯನ್ನು ಕಕ್ಷೆಯಲ್ಲಿ ಡಾಕಿಂಗ್ ಮತ್ತು ಅನ್‌ಡಾಕಿಂಗ್ ಮಾಡುವುದನ್ನು ಪ್ರದರ್ಶಿಸಲಿದೆ.

ಈ ಕುರಿತಂತೆ ಒಂದು ವರದಿ..

**( ಧ್ವನಿ: ಸುಧೀಂದ್ರ,ಎಚ್.ಆರ್)**

ಚಂದ್ರನಿಂದ ಕಲ್ಲುಗಳು ಮತ್ತು ಮಣ್ಣನ್ನು ಪಡೆಯುವುದು, ಪ್ರಸ್ತಾವಿತ ಭಾರತೀಯ ಅಂತರಿಕ್ಷಾ ನಿಲ್ದಾಣ ಮತ್ತು ಚಂದ್ರನ ಮೇಲ್ಮೈಯಲ್ಲಿ ಗಗನಯಾತ್ರಿಯನ್ನು ಇಳಿಸುವುದು ಸೇರಿದಂತೆ ಬಾಹ್ಯಾಕಾಶ ಸಂಶೋಧನೆಯಲ್ಲಿ ಭಾರತದ ಭವಿಷ್ಯದ ಪ್ರಯತ್ನಗಳಿಗೆ ಸ್ಪೇಡೆಕ್ಸ್ ಯೋಜನೆ ಒಂದು ಮಹತ್ವದ ಹೆಜ್ಜೆ ಎಂದು ಪರಿಗಣಿಸಲಾಗಿದೆ. ಅಮೆರಿಕ, ರಷ್ಯಾ ಮತ್ತು ಚೀನಾ ಮಾತ್ರ ಬಾಹ್ಯಾಕಾಶ ಡಾಕಿಂಗ್ ತಂತ್ರಜ್ಞಾನಗಳನ್ನು ಕರಗತ ಮಾಡಿಕೊಂಡಿವೆ. ಡಾಕ್ ಮಾಡಲಾದ ಬಾಹ್ಯಾಕಾಶ ನೌಕೆಯ ನಡುವೆ ವಿದ್ಯುತ್ ಶಕ್ತಿಯ ವರ್ಗಾವಣೆ ಈ ಯೋಜನೆಯ ಮತ್ತೊಂದು ಉದ್ದೇಶವಾಗಿದೆ.

ಎಸ್‌ಡಿಎಕ್ಸ್೦೧ ಉಪಗ್ರಹ ಹೈ-ರೆಸಲ್ಯೂಶನ್ ಕ್ಯಾಮೆರಾ ಹೆಚ್‌ಆರ್‌ಸಿ ಯನ್ನು ಹೊಂದಿದ್ದು, ಮತ್ತು ಎಸ್‌ಡಿಎಕ್ಸ್೦೨ ಎರಡು ಪೇಲೋಡ್‌ಗಳನ್ನು ಹೊಂದಿದೆ. ಈ ಪೇಲೋಡ್‌ಗಳು ಚಿತ್ರಗಳು, ನೈಸರ್ಗಿಕ ಸಂಪನ್ಮೂಲಗಳ ಮೇಲ್ವಿಚಾರಣೆ, ಸಸ್ಯವರ್ಗದ ಅಧ್ಯಯನಗಳು ಮತ್ತು ಕಕ್ಷೆಯಲ್ಲಿರುವ ವಿಕಿರಣ ಪರಿಸರ ಮಾಪನಗಳನ್ನು ಒದಗಿಸಲಿದೆ ಎಂದು ಇಸ್ರೋ ತಿಳಿಸಿದೆ.

<><*<><>*><>

ಸಚಿವ ಪ್ರಿಯಾಂಕ್ ಖರ್ಗೆ ರಾಜೀನಾಮೆ ನೀಡುವ ಅಗತ್ಯವಿಲ್ಲ ಎಂದು ಗೃಹ ಸಚಿವ ಪರಮೇಶ್ವರ್ ಸ್ಪಷ್ಟಪಡಿಸಿದ್ದಾರೆ. ಬೆಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಿಯಾಂಕ್ ಖರ್ಗೆ ಅವರ ಮೇಲಿನ ಆರೋಪ ಪ್ರಕರಣವನ್ನು ಸಿಐಡಿಗೆ ವಹಿಸಲಾಗಿದೆ ಎಂದು ತಿಳಿಸಿದ್ದಾರೆ. ಆತ್ಮಹತ್ಯೆ ಮಾಡಿಕೊಂಡ ಗುತ್ತಿದಾರರನ ಡೆತ್‌ನೋಟ್‌ನಲ್ಲಿ ಸಚಿವರ ಹೆಸರು ಇಲ್ಲ. ಬಿಜೆಪಿ ನಾಯಕರು ಸಚಿವರನ್ನು ಹೆಸರನ್ನು ತಂದು ಸರ್ಕಾರಕ್ಕೆ ಮಸಿ ಬಳಿಯುವ ಕೆಲಸ ಮಾಡುತ್ತಿದ್ದಾರೆ ಎಂದು ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಸತ್ಯಾಸತ್ಯತೆ ಹೊರಬರಲಿ ಎಂಬ ದೃಷ್ಟಿಯಿಂದ ಮುಖ್ಯಮಂತ್ರಿಯವರೊಂದಿಗೆ ಚರ್ಚಿಸಿ ಸಿಐಡಿ ತನಿಖೆಗೆ ವಹಿಸಲಾಗಿದೆ ಎಂದು ತಿಳಿಸಿದ್ದಾರೆ.

**ಧ್ವನಿ: ಪರಮೇಶ್ವರ್, ಗೃಹ ಸಚಿವ**

ಈ ಕುರಿತಂತೆ ಬೆಂಗಳೂರಿನಲ್ಲಿ ಪ್ರತಿಕ್ರಿಯಿಸಿರುವ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಗುತ್ತಿದಾರನ ಆತ್ಮಹತ್ಯೆ ಪ್ರಕರಣದಲ್ಲಿ ಸಚಿವ ಪ್ರಿಯಾಂಕ್ ಖರ್ಗೆ ಪಾತ್ರವಿಲ್ಲ ಎಂದು ಸ್ಪಷ್ಟಪಡಿಸಿದ್ದಾರೆ.

<><*<><>*><>

ಕಲಬುರಗಿಯಲ್ಲಿ ಗುತ್ತಿಗೆದಾರ ಆತ್ಯಹತ್ಯೆ ಪ್ರಕರಣವನ್ನು ಸಿ.ಬಿ.ಐ ತನಿಖೆಗೆ ವಹಿಸಬೇಕು ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅಗ್ರಹಿಸಿದ್ದಾರೆ. ಬೆಂಗಳೂರಿನಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪ್ರಿಯಾಂಕ್ ಖರ್ಗೆ ಪ್ರಭಾವಿ ಸಚಿವರಾಗಿರುವ ಹಿನ್ನಲೆಯಲ್ಲಿ ಪೊಲೀಸ್ ತನಿಖೆಯಿಂದ ನ್ಯಾಯ ಸಿಗುವುದು ಅನುಮಾನ. ಹೀಗಾಗಿ ನಿಷ್ಪಕ್ಷಪಾತ ತನಿಖೆ ನಡೆಯಲು ಸಿಬಿಐಗೆ ವಹಿಸಬೇಕೆಂದು ಒತ್ತಾಯಿಸಿದ್ದಾರೆ. ಇದೇ ವೇಳೆ ರೈತರಿಗೆ ಬಾಕಿ ಇರುವ ಹಾಲಿನ ೬೨೨ ಕೋಟಿ ರೂಪಾಯಿಗಳನ್ನು ಬಿಡುಗಡೆ ಮಾಡುವಂತೆ ಸರಕಾರವನ್ನು ಅವರು ಒತ್ತಾಯಿಸಿದ್ದಾರೆ.

<><*<><>*><>

ಕೊಡಗು ಜಿಲ್ಲೆಯ ಕಟ್ಟೆಮಾಡು ಗ್ರಾಮದಲ್ಲಿ ಉಭಯ ಸಮುದಾಯಗಳ ನಡುವಿನ ಭಿನ್ನಾಭಿಪ್ರಾಯ ಹೆಚ್ಚಾಗಿರುವ ಹಿನ್ನಲೆಯಲ್ಲಿ ಇಂದು ದೇವಾಲಯ ವ್ಯಾಪ್ತಿಯಲ್ಲಿ ನಿಷೇಧಾಜ್ಞೆ ಹೊರಡಿಸಲಾಗಿದೆ. ದೇವಾಲಯ ವ್ಯಾಪ್ತಿಯಲ್ಲಿ ಸುಮಾರು ೩೦೦ಕ್ಕೂ ಹೆಚ್ಚು ಪೊಲೀಸರನ್ನು ಬಿಗಿ ಭದ್ರತೆಗಾಗಿ ನಿಯೋಜಿಸಲಾಗಿದೆ, ಜಿಲ್ಲಾಧಿಕಾರಿ ಮತ್ತು ಪೊಲೀಸ್ ವರಿಷ್ಠಾಧಿಕಾರಿ ನೇತೃತ್ವದಲ್ಲಿ ಇಂದು

ಮಧ್ಯಾಹ್ನ ೩ ಗಂಟೆಗೆ ಉಭಯ ಸಮುದಾಯಗಳ ಮುಖಂಡರ ಸಭೆ ನಡೆಯಲಿದೆ. ಸಭೆಯಲ್ಲಿ ಶಾಂತಿಯುತ ಪರಿಹಾರ ದೊರಕುವ ಸಾಧ್ಯತೆಯಿದೆ ಎಂದು ವಿರಾಜಪೇಟೆ ಶಾಸಕ ಎ.ಎಸ್. ಪೊನ್ನಣ್ಣ ಭರವಸೆ ವ್ಯಕ್ತಪಡಿಸಿದ್ದಾರೆ. ಕೊಡಗು ಪೊಲೀಸ್ ವರಿಷ್ಠಾಧಿಕಾರಿ ಕೆ. ರಾಮರಾಜನ್ ಮಾತನಾಡಿ, ಕೊಡಗಿನಲ್ಲಿ ಶಾಂತಿಸೌಹಾರ್ಧತೆ ಕಾಪಾಡುವ ನಿಟ್ಟಿನಲ್ಲಿ ಎಲ್ಲರೂ ಸಹಕರಿಸುವಂತೆ ಮನವಿ ಮಾಡಿದ್ದಾರೆ, ಈ ನಡುವೆ ಪೊನ್ನಂಪೇಟೆಯಿಂದ ಕಟ್ಟೆಮಾಡು ದೇವಾಲಯಕ್ಕೆ ವಾಹನ ಜಾಥಾ ಹೊರಟಿದ್ದವರನ್ನು ಪೊಲೀಸರು ಪೊನ್ನಂಪೇಟೆಯಲ್ಲಿಯೇ ವಶಕ್ಕೆ ಪಡೆದುಕೊಂಡಿದ್ದಾರೆ.

**<><*<><>*><>**

೨೦೨೪ನೇ ಸಾಲಿನ ವಾರ್ಷಿಕ ವಿದ್ಯಮಾನ ಒಳಗೊಂಡ ವಾರ್ತಾ ಸಂಚಿಕೆ ಕಾಲಚಕ್ರ ನಾಳೆ ರಾತ್ರಿ ೭.೪೫ ರಿಂದ ೮.೪೫ರವರೆಗೆ ಪ್ರಸಾರವಾಗಲಿದೆ. ಜನವರಿಯಿಂದ ಡಿಸೆಂಬರ್ ಅಂತ್ಯದವರೆಗೆ ಪ್ರಮುಖ ಘಟನಾವಳಿಗಳ ಸಂಕ್ಷಿಪ್ತ ಅವಲೋಕನವನ್ನು ಇದು ಒಳಗೊಂಡಿದೆ. ಬೆಂಗಳೂರು ಆಕಾಶವಾಣಿ ಸುದ್ದಿವಿಭಾಗ ಈ ಕಾರ್ಯಕ್ರಮವನ್ನು ಸಿದ್ಧಪಡಿಸಿದೆ.

**ಕೇಳಿ ಕಾಲಚಕ್ರ**

**<><*<><>*><>**

೨೦೨೫ರ ಜನವರಿ ೧ರಿಂದ ಜಾರಿಗೆ ಬರುವಂತೆ ನೈರುತ್ಯ ರೈಲ್ವೆ ವ್ಯಾಪ್ತಿಯಲ್ಲಿ ವಿವಿಧ ರೈಲುಗಳ ಆಗಮನ - ನಿರ್ಗಮನ ಸಮಯವನ್ನು ಪರಿಷ್ಕರಣೆ ಮಾಡಲಾಗಿದೆ ಎಂದು ರೈಲ್ವೆ ಇಲಾಖೆ ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ swr.indianrailways.gov.in ಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದಾಗಿದೆ. ಜೊತೆಗ ರೈಲ್ವೆ ಸಹಾಯವಾಣಿ ಸಂಖ್ಯೆ ೧೩೯ಕ್ಕೆ ಡಯಲ್ ಮಾಡಿಯೂ ಸಹಾ ವಿವರವನ್ನು ಪಡೆದುಕೊಳ್ಳಬಹುದು.

**<><*<><>*><>**

ಹೊಸ ವರ್ಷ ೨೦೨೫ಕ್ಕೆ ಒಂದೇ ದಿನ ಬಾಕಿಯಿದೆ. ಬೆಂಗಳೂರು ನಗರದ ಪೊಲೀಸರು ಹೊಸ ವರ್ಷ ಸಂಭ್ರಮಾಚರಣೆಗಾಗಿ ಜನರು ಹೆಚ್ಚಾಗಿ ಸೇರುವ ಕಡೆಗಳಲ್ಲಿ ಜನರು ಹಾಗೂ ವಾಹನಗಳ ಸುಗಮ ಸಂಚಾರಕ್ಕಾಗಿ ಬಿಗಿ ಭದ್ರತೆ ನಿಯೋಜನೆಯೊಂದಿಗೆ ವ್ಯಾಪಕವಾದ ಭದ್ರತಾ ವ್ಯವಸ್ಥೆ ಮಾಡಿದ್ದಾರೆ. ಪ್ರತಿ ವರ್ಷದಂತೆ ಬೆಂಗಳೂರು ನಗರದಲ್ಲಿ ಹೊಸ ವರ್ಷಾಚರಣೆಗೆ ಯಾವುದೇ ಅಹಿತಕರ ಘಟನೆಗಳು ನಡೆಯದಂತೆ ಬಿಗಿ ಬಂದೋಬಸ್ತ್ ವ್ಯವಸ್ಥೆ ಮಾಡಲಾಗಿದೆ. ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರುವ ಪ್ರದೇಶಗಳನ್ನು ಗುರುತಿಸಲಾಗಿದೆ. ಎಂ.ಜಿ.ರಸ್ತೆ, ಬ್ರಿಗೇಡ್ ರಸ್ತೆ ಜಂಕ್ಷನ್, ಕೋರಮಂಗಲ, ಇಂದಿರಾನಗರ ಮತ್ತಿತರ ಕಡೆಗಳಲ್ಲಿ ಬಿಗಿ ಭದ್ರತಾ ವ್ಯವಸ್ಥೆ ಕಲ್ಪಿಸಲಾಗಿದೆ.

**<><*<><>*><>**

ಸೈಬರ್ ಪ್ರಕರಣಗಳ ಕುರಿತಂತೆ ಸಾರ್ವಜನಿಕರು ಎಚ್ಚರಿಕೆ ವಹಿಸಬೇಕು ಎಂದು ಮಂಗಳೂರು ನಗರ ಪೊಲೀಸ್ ಆಯುಕ್ತ ಅನುಪಮ್ ಅಗರ್ ವಾಲ್ ತಿಳಿಸಿದ್ದಾರೆ. ಹೊಸ ವರ್ಷಕ್ಕೆ

ಶುಭಾಶಯವನ್ನು ಕೋರುವ ಲಿಂಕ್‌ಗಳನ್ನು ಎಪಿಕೆ ಫೈಲ್‌ಗಳಲ್ಲಿ ಮೊಬೈಲ್‌ಗೆ ಕಳುಹಿಸಿ ಹ್ಯಾಕ್ ಮಾಡುವ ಸಾಧ್ಯತೆ ಇದೆ ಎಂದು ಎಚ್ಚರಿಕೆ ನೀಡಿದ್ದಾರೆ. ಯಾವುದೇ ಸೈಬರ್ ಅಪರಾಧಕ್ಕೆ ಒಳಗಾದರೆ ಕೂಡಲೇ ೧೯೩೦ಗೆ ಕರೆ ಮಾಡಬೇಕು ಅಥವಾ www.cybercrime.gov.in ನಲ್ಲಿ ದೂರು ಸಲ್ಲಿಸುವಂತೆ ತಿಳಿಸಿದ್ದಾರೆ.

**<><*<><>*><>**

ಹೊಸ ವರ್ಷ ಹಿನ್ನಲೆಯಲ್ಲಿ ಮಂಡ್ಯ ಜಿಲ್ಲೆಯ ಪ್ರವಾಸಿ ತಾಣಗಳಿಗೆ ಪ್ರವಾಸಿಗರಿಗೆ ನಿರ್ಬಂಧ ವಿಧಿಸಲಾಗಿದೆ. ಮಂಡ್ಯ ಜಿಲ್ಲೆಯ ಮಳವಳ್ಳಿ ತಾಲ್ಲೂಕಿನ ಮುತ್ತತ್ತಿ, ಭೀಮೇಶ್ವರಿ ಫಿಶಿಂಗ್ ಕ್ಯಾಂಪ್ ಹಾಗೂ ಶ್ರೀರಂಗಪಟ್ಟಣದ ಬಲಮುರಿ ಮತ್ತು ಕಾವೇರಿ ನದಿ ಹಿನ್ನೀರಿನ ಪ್ರದೇಶಕ್ಕೆ ಡಿಸೆಂಬರ್ ೩೧ರ ಸಂಜೆ ಐದು ಗಂಟೆಯಿಂದ ಜನವರಿ ೨ ಬೆಳಿಗ್ಗೆ ೬ಗಂಟೆಯವರೆಗೆ ಪ್ರವಾಸಿಗರಿಗೆ ನಿರ್ಬಂಧ ವಿಧಿಸಲಾಗಿದೆ ಎಂದು ತಾಲೂಕು ಆಡಳಿತ ಪ್ರಕಟಣೆಯಲ್ಲಿ ತಿಳಿಸಿದೆ. ಚಿಕ್ಕಮಗಳೂರಿನ ಮುಳ್ಳಯ್ಯನಗಿರಿ, ಬಾಬಾಬುಡನ್‌ಗಿರಿ ಸೇರಿದಂತೆ ಹಲವು ಪ್ರದೇಶಗಳಿಗೆ ಜಿಲ್ಲಾಡಳಿತ ನಿರ್ಬಂಧ ವಿಧಿಸಿದೆ.

**<><*<><>*><>**

ಹೊಸ ವರ್ಷದಂದು ಚಾಮುಂಡಿಬೆಟ್ಟಕ್ಕೆ ಆಗಮಿಸುವ ಭಕ್ತರಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸಬೇಕು ಎಂದು ಮೈಸೂರು ಜಿಲ್ಲಾಧಿಕಾರಿ ಜಿ. ಲಕ್ಷ್ಮೀಕಾಂತ ರೆಡ್ಡಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ. ಜಿಲ್ಲಾ ಪಂಚಾಯತ್ ನಲ್ಲಿ ಇಂದು ನಡೆದ ಸಭೆಯಲ್ಲಿ ಮಾತನಾಡಿದ ಅವರು, ಪೊಲೀಸ್ ಇಲಾಖೆಯ ಅಧಿಕಾರಿಗಳು ಚಾಮುಂಡಿ ಬೆಟ್ಟಕ್ಕೆ ಆಗಮಿಸುವ ಭಕ್ತರಿಗೆ ಬಂದೋಬಸ್ ವ್ಯವಸ್ಥೆ ಮಾಡಬೇಕು. ವಾಹನ ಸಂಚಾರ ನಿಯಂತ್ರಣ ಮಾಡುವುದಲ್ಲದೆ, ಬೆಟ್ಟಕ್ಕೆ ಹೊಸವರ್ಷದ ದಿನ ಆಟೋಗಳ ಪ್ರವೇಶವನ್ನು ನಿರ್ಬಂಧಿಸಬೇಕು ಎಂದು ನಿರ್ದೇಶನ ನೀಡಿದ್ದಾರೆ. ಇದೇ ವೇಳೆ ಚಾಮುಂಡಿ ಬೆಟ್ಟಕ್ಕೆ ಮತ್ತು ನಗರ ಬಸ್ ನಿಲ್ದಾಣದಿಂದ ಹಾಗೂ ರೈಲ್ವೆ ನಿಲ್ದಾಣದಿಂದ ನೇರವಾಗಿ ಚಾಮುಂಡಿ ಬೆಟ್ಟಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಬಸ್ ಗಳ ವ್ಯವಸ್ಥೆ ಮಾಡಬೇಕು ಎಂದು ತಿಳಿಸಿದ್ದಾರೆ. ಒಂದು ದಿನದ ಅವಧಿಗೆ ದೇವಾಲಯದ ಬಳಿ ಮತ್ತೊಂದು ಆಂಬುಲೆನ್ಸ್ ನುರಿತ ವೈದ್ಯರು, ಚಾಲಕ ಹಾಗೂ ಅಗತ್ಯ ಸಿಬ್ಬಂದಿಯನ್ನು ನಿಯೋಜಿಸಬೇಕು ಎಂದು ಆರೋಗ್ಯ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<>ನಮ್ಮ ಮುಂದಿನ ವಾರ್ತಾ ಪ್ರಸಾರ ಸಂಜೆ ೬.೪೦ ಕ್ಕೆ <>*><>**